ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 24–08–2017

# ಪತ್ರಕರ್ತರ ಗಮನಕ್ಕೆ

ಶ್ರೀಲಂಕಾ ದೇಶದ ಪ್ರಧಾನ ಮಂತ್ರಿಯವರು ಆಗಸ್ಟ್ 25, 26 ಹಾಗೂ 27 ರಂದು ಮೂರು ದಿನ ಕಾಲ ಬೆಂಗಳೂರು ನಗರ ಹಾಗೂ ಕೊಲ್ಲೂರು ಕ್ಷೇತ್ರಕ್ಕೆ ಭೇಟಿ ನೀಡುತ್ತಿರುವ ಹಿನ್ನೆಲೆಯಲ್ಲಿ ಅವರ ಕಾರ್ಯಕ್ರಮಗಳ ವರದಿಗಾಗಿ ಆಗಮಿಸುವ ಮಾಧ್ಯಮ ಮಾನ್ಯತಾ ಪತ್ರ ಹೊಂದಿರುವ ರಾಜ್ಯ ಮತ್ತು ರಾಷ್ಟ್ರಮಟ್ಟದ ಮಾಧ್ಯಮ ಪ್ರತಿನಿಧಿಗಳು ಪ್ರವೇಶ ಪತ್ರವನ್ನು ಪೊಲೀಸ್ ಆಯುಕ್ತರು, (ವಿ.ವಿ.ಐ.ಪಿ ಭದ್ರತೆ ವಿಭಾಗ) ಬೆಂಗಳೂರು ಇಲ್ಲಿ ಸಂಪರ್ಕಿಸಿ ಪಡೆದುಕೊಳ್ಳಬಹುದು.

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

## ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನ ನವೀಕರಣಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 24 (ಕರ್ನಾಟಕ ವಾರ್ತೆ)

2015 ನೇ ಸಾಲಿನಲ್ಲಿ ಕೇಂದ್ರದ ಸರ್ಕಾರದ **"Direct Benefit Transfer (DBT) Programme"** ನ ಅಡಿಯಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಅವರ ದ್ವಿತೀಯ ನವೀಕರಣಕ್ಕಾಗಿ **"Online"** ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ **website:www.scholarships.gov.in** ನ **National e-scholarship portaL** ನಲ್ಲಿ ಹೊಸ ತಂತ್ರಾಂಶವನ್ನು ಆಳವಡಿಸಲಾಗಿರುತ್ತದೆ. ಆದಕಾರಣ, 2015 ನೇ ಸಾಲಿನಲ್ಲಿ

ಎಂ.ಹೆಚ್.ಆರ್. ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು ದ್ವಿತೀಯ ನವೀಕರಣ ನಿಮಿತ್ತ ಈ **portal** ನಲ್ಲಿಯೇ ಅರ್ಜಿಗಳನ್ನು **"Online"** ಮೂಲಕ ಆಗಸ್ಟ್ **31** ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಇಲಾಖಾ ವೆಬ್‌ಸೈಟ್‌ನಲ್ಲಿಯೂ ಕೂಡ **2015** ನೇ ಸಾಲಿನಲ್ಲಿ ಆಯ್ಕೆಗೊಂಡಿರುವ ವಿದ್ಯಾರ್ಥಿಗಳಿಗೆ **"Online"** ಮೂಲಕ ದ್ವಿತೀಯ ನವೀಕರಣಕ್ಕೆ ಅರ್ಜಿ ಸಲ್ಲಿಸುವ ಕುರಿತು ಸುತ್ತೋಲೆಯನ್ನು ಅಳವಡಿಸಲಾಗಿದೆ. ವೆಬ್‌ಸೈಟ್: **http://pue.kar.nic.in=Scholarship=>MHRD Scholarship=>2015 – II RENEWAL** ವಿದ್ಯಾರ್ಥಿಗಳು ಈ ವೆಬ್‌ಸೈಟ್‌ನ್ನು ಸಂಪರ್ಕಿಸಿ ತಮಗೆ ಸಂಬಂಧಪಟ್ಟ ಮಾಹಿತಿಯನ್ನು ಪಡೆದು ಆಗಸ್ಟ್ **31** ರೊಳಗಾಗಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬೇಕು.

ದ್ವಿತೀಯ ನವೀಕರಣ ಹಾಗೂ ಇನ್ನು ಮುಂದಿನ ನವೀಕರಣಗಳಿಗೆ ಆಧಾರ್ ಸಂಖ್ಯೆಯನ್ನು ಪಡೆದು ಬ್ಯಾಂಕ್ ಖಾತೆಯೊಂದಿಗೆ ಲಿಂಕ್ ಮಾಡಿರುವುದು. ಪ್ರಾಚಾರ್ಯರುಗಳು/ಸಂಸ್ಥೆಯವರು ಅರ್ಹ ವಿದ್ಯಾರ್ಥಿಗಳ ಅರ್ಜಿಗಳನ್ನು ಪರಿಶೀಲಿಸಿ ಅನುಮೋದಿಸುವ/ತಿರಸ್ಕರಿಸುವ ಕಾರ್ಯವನ್ನು ತಮ್ಮ ಹಂತದಲ್ಲಿಯೇ ನಿರ್ವಹಿಸಲಾಗುವುದು ಎಂದು ಪದವಿಪೂರ್ವ ಶಿಕ್ಷಣ ಇಲಾಖೆ ಪ್ರಕಟಣೆ ತಿಳಿಸಿದೆ.

ಜೆಡಿ:ಜಿಪಿಆರ್

## ಕನ್ನಡ ಮತ್ತು ಸಂಸ್ಕೃತಿ ಸಚಿವರಿಂದ
## ಗೌರಿ – ಗಣೇಶ ಹಬ್ಬದ ಶುಭಾಶಯ

ಬೆಂಗಳೂರು, ಆಗಸ್ಟ್ 24 (ಕರ್ನಾಟಕ ವಾರ್ತೆ)

ನಾಡಿನ ಸಮಸ್ತೆ ಜನತೆಗೆ ಕನ್ನಡ ಮತ್ತು ಸಂಸ್ಕೃತಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಶ್ರೀಮತಿ ಉಮಾಶ್ರೀ ಅವರು ಗೌರಿ – ಗಣೇಶ ಹಬ್ಬ ಶುಭಾಶಯವನ್ನು ಕೋರಿದ್ದಾರೆ.

ವಿಘ್ನ ನಿವಾರಕ ಗಣೇಶ ನಾಡಿನ ಎಲ್ಲಾ ಜನವರ್ಗಗಳ ಸಂಕಷ್ಟವನ್ನು ದೂರಮಾಡಿ ಸುಖ–ಶಾಂತಿ–ನೆಮ್ಮದಿಯನ್ನು ಕರುಣಿಸಲಿ ಎಂದು ಅವರ ತಮ್ಮ ಶುಭ ಸಂದೇಶದಲ್ಲಿ ತಿಳಿಸಿದ್ದಾರೆ.

ಕಿರಣ:ಜೆಡಿ:ಜಿಪಿಆರ್

## ಬೆಂಗಳೂರು–ಕೆಮ್ಮಣ್ಣುಗುಂಡಿ ಮಾರ್ಗದಲ್ಲಿ ಕೆಎಸ್‌ಆರ್‌ಟಿಸಿ ಹೊಸ ಬಸ್

ಬೆಂಗಳೂರು, ಆಗಸ್ಟ್ 24 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬೆಂಗಳೂರು ಕೇಂದ್ರೀಯ ವಿಭಾಗದ ವತಿಯಿಂದ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ದಿನಾಂಕ 28/08/2017 ರಿಂದ ಹೊಸದಾಗಿ ಬೆಂಗಳೂರು–ಕೆಮ್ಮಣ್ಣುಗುಂಡಿ ಮಾರ್ಗದಲ್ಲಿ ವೇಗದೂತ ವಾಹನವನ್ನು ಆರಂಭಿಸುತ್ತಿದೆ.

ಬೆಂಗಳೂರಿನಿಂದ ಬೆಳಿಗ್ಗೆ 6 ಗಂಟೆಗೆ ಹೊರಡವು ಬಸ್ ಮದ್ಯಾಹ್ನ 12:15 ಗಂಟೆಗೆ ತಲುಪಲಿದೆ. ಅದೇ ರೀತಿ ಕೆಮ್ಮಣ್ಣುಗುಂಡಿಯಿಂದ ಮದ್ಯಾಹ್ನ 3:45ಕ್ಕೆ ಹೊರಟು ರಾತ್ರಿ 10 ಗಂಟೆಗೆ ಬೆಂಗಳೂರು ತಲುಪಲಿದೆ. ಪ್ರಯಾಣ ಧರ 233 ರೂ. ಎಂದು ಪ್ರಕಟಣೆ ತಿಳಿಸಿದೆ.

## <u>ಕಬ್ಬನ್ ಉದ್ಯಾನವನದಲ್ಲಿ ಈ ಭಾನುವಾರ</u>

ಬೆಂಗಳೂರು, ಆಗಸ್ಟ್ 24 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ: **27–08–2017** ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1. ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ" ಎಂಬ ಶೀರ್ಷಿಕೆಯಡಿ ಶ್ರೀ ಮುನಿಕೃಷ್ಣ ಜಿ ಮತ್ತು ತಂಡ, ಚಿಕ್ಕಬಳ್ಳಾಪುರ ರವರಿಂದ ಕನ್ನಡ ಜಾಗೃತಿ ಗೀತಗಾಯನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

2. ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ" ಎಂಬ ಶೀರ್ಷಿಕೆಯಡಿ ಶ್ರೀ ಎನ್. ಇಂದ್ರೇಶ್ ಕುಮಾರ್ ಮತ್ತು ತಂಡ, ಮೈಸೂರು ರವರಿಂದ ಜಾನಪದ ಗಾಯನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3. ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

4. ಕಬ್ಬನ್ ಉದ್ಯಾನವನದನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ ಸೇವೆಯನ್ನು ನಿಗದಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:**

## F. ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ:

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್, ಬೆಂಗಳೂರು ಸಂಸ್ಥೆಯ ಸಹಯೋಗದೊಂಇದಗೆ ಕು. ತನುಶ್ರೀ ರವರಿಂದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

- ಬೆಳಿಗ್ಗೆ 8.00 ಗಂಟೆಯಿಂದ 9–00 ಗಂಟೆಯವರೆಗೆ ಶ್ರೀವಾಣಿ ವಿದ್ಯಾ ಕೇಂದ್ರ, ಮಾಚೋಹಳ್ಳಿ, ಬೆಂಗಳೂರು ಶಾಲಾ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

## II. ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ:

- ಬೆಳಿಗ್ಗೆ 6.30 ರಿಂದ ಬೆಳಿಗ್ಗೆ 10.00 ಗಂಟೆಯವರೆಗೆ ದಿ ಹಿಂದೂ ಗ್ರೂಪ್ ವತಿಯಿಂದ "ಸೈಕಲ್ ಡೇ" ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಜುಂಬಾ, ಯೋಗಾ, ಸೈಕಲ್ ರ್‍ಯಾಲಿ, ರೀಡಿಂಗ್ ಜೋನ್ ಹಾಗೂ ಇತರೇ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ.

- ಬೆಳಿಗ್ಗೆ 7.00 ರಿಂದ ಸಂಜೆ 6.00 ಗಂಟೆಯವರೆಗೆ 32 ನೇ ರಾಷ್ಟ್ರೀಯ ನೇತ್ರದಾನ ಪಾಕ್ಷಿಕ ಪ್ರಯುಕ್ತ ಲಯನ್ಸ್, ಅಂತರಾಷ್ಟ್ರೀಯ ನೇತ್ರ ಭಂಡಾರ, ಬೆಂಗಳೂರು ಎವರ ವತಿಯಿಂದ ಸಾರ್ವಜನಿಕರಿಗೆ ನೇತ್ರದಾನದ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಮತ್ತು ನೇತ್ರದಾನ ನೋಂದಣೆ ಕಾರ್ಯಕ್ರಮ ಏರ್ಪಡಿಸಲಾಗಿದೆ.

**ಜೆಡಿ:ಜಿಪಿಆರ್**